# Akashvani : Bangalore
# National Bulletin In Kannada
# 06.07.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.07.2024 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಈ ತಿಂಗಳ ೨೨ ರಂದು ಸಂಸತ್ತಿನ ಬಜೆಟ್ ಅಧಿವೇಶನ ಪ್ರಾರಂಭ; ೨೩ ರಂದು ಮುಂಗಡ ಪತ್ರ ಮಂಡನೆ

೨. ಯುವ ಜನತೆಯ ಉತ್ಸಾಹ ಮತ್ತು ಬದ್ಧತೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಬಲ್ಲದು - ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್

೩. ಮುಂದಿನ ಐದು ವರ್ಷಗಳಲ್ಲಿ ಎರಡು ಲಕ್ಷ ಗ್ರಾಮಪಂಚಾಯಿತಿಗಳಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಂಘ ಸ್ಥಾಪನೆ - ಅಮಿತ್ ಶಾ

೪. ಟಿ-೨೦ ಕ್ರಿಕೆಟ್: ಭಾರತಕ್ಕೆ ಗೆಲ್ಲಲು ಜಿಂಬಾಂಬೆಯಿಂದ ೧೧೬ ರನ್‌ಗಳ ಸವಾಲು

**<><*<><>*><>**

ಸಂಸತ್ತಿನ ಮುಂಗಡ ಪತ್ರ ಅಧಿವೇಶನ ಈ ತಿಂಗಳ ೨೨ ರಂದು ಆರಂಭವಾಗಲಿದೆ. ಮರುದಿನ ೨೩ ರಂದು ಲೋಕಸಭೆಯಲ್ಲಿ ೨೦೨೪-೨೫ನೇ ಸಾಲಿನ ಬಜೆಟ್ ಅನ್ನು ಮಂಡಿಸಲಾಗುವುದು. ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜಿಜು, ಸಾಮಾಜಿಕ ಮಾಧ್ಯಮದಲ್ಲಿ ಈ ವಿಷಯ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಶಿಫಾರಸ್ಸಿನ ಮೇಲೆ ಬಜೆಟ್ ಅಧಿವೇಶನಕ್ಕಾಗಿ ಉಭಯ ಸದನಗಳನ್ನು ಸಮಾವೇಶಗೊಳಿಸುವ ಪ್ರಸ್ತಾಪಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅನುಮೋದನೆ ನೀಡಿದ್ದಾರೆ. ಅಧಿವೇಶನ ಆಗಸ್ಟ್ ೧೨ರ ವರೆಗೆ ನಡೆಯಲಿದೆ ಎಂದು ಸಚಿವ ಕಿರಣ್ ರಿಜಿಜು ಮಾಹಿತಿ ನೀಡಿದ್ದಾರೆ.

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನಾಲ್ಕು ದಿನಗಳ ಒಡಿಶಾ ಭೇಟಿಗಾಗಿ ಇಂದು ಸಂಜೆ ಭುವನೇಶ್ವರಕ್ಕೆ ಆಗಮಿಸಿದರು. ಒಡಿಶಾ ರಾಜ್ಯಪಾಲ ರಘುಬರ್ ದಾಸ್, ಮುಖ್ಯಮಂತ್ರಿ ಮೋಹನ್ ಚರಣ್ ಮಜ್ ಹಿ, ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ

ನಿಲ್ದಾಣದಲ್ಲಿ ರಾಷ್ಟ್ರಪತಿಯವರನ್ನು ಬರಮಾಡಿಕೊಂಡರು. ಕರಾವಳಿಯ ಪುಣ್ಯ ನಗರಿ ಪುರಿಯಲ್ಲಿ ನಾಳೆ ನಡೆಯಲಿರುವ ವಿಶ್ವ ವಿಖ್ಯಾತ ಭಗವಾನ್ ಜಗನ್ನಾಥ, ಭಗವಾನ್ ಬಲಭದ್ರ, ದೇವಿ ಸುಭದ್ರಾ ಮತ್ತು ಭಗವಾನ್ ಸುದರ್ಶನ ರಥಯಾತ್ರೆಯ ದರ್ಶನ ಪಡೆಯಲು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ತಮ್ಮ ತವರು ರಾಜ್ಯಕ್ಕೆ ಭೇಟಿ ನೀಡುತ್ತಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಭುವನೇಶ್ವರದಲ್ಲಿಂದು ಉತ್ಕಲ್ ಮಣಿ ಪಂಡಿತ್ ಗೋಪಬಂದುದಾಸ್ ಅವರ ೯೬ನೇ ಪುಣ್ಯತಿಥಿ ನಮನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಅವರು, ಭುವನೇಶ್ವರದ ಐತಿಹಾಸಿಕ ಉದಯ ಗಿರಿ ಮತ್ತು ಕಂಡಗಿರಿ ಗುಹೆಗಳಿಗೆ ಭೇಟಿ ನೀಡುವ ಕಾರ್ಯಕ್ರಮವಿದ್ದು, ಬಿಬುತಿ ಕನುಂಗೊ ಕಾಲೇಜಿನ ಹಾಗೂ ಉತ್ಕಲ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಸೋಮವಾರ ಸಂವಾದ ನಡೆಸಲಿದ್ದಾರೆ. ಭುವನೇಶ್ವರ ಸಮೀಪದ ಹರೀದ್ ಮದಾ ಗ್ರಾಮದಲ್ಲಿ ಬ್ರಹ್ಮಕುಮಾರಿ ಅವರ ಡಿವೈನ್ ರೀಟ್ರೀಟ್ ಕೇಂದ್ರ ಉದ್ಘಾಟನೆ ನೆರವೇರಿಸಲಿದ್ದು, ರಾಷ್ಟ್ರೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋದನೆ ಸಂಸ್ಥೆಯ ೧೩ನೇ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರಪತಿ ಅವರು, ಮಂಗಳವಾರ ದೆಹಲಿಗೆ ಹಿಂತಿರುಗುವ ಕಾರ್ಯಕ್ರಮವಿದೆ.

<><*<><>*><>

ಯುವ ಜನತೆಯ ಉತ್ಸಾಹ ಮತ್ತು ಬದ್ಧತೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸ ಬಲ್ಲದು ಎಂದು ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಅವರು, ಕೇರಳದ ತಿರುವನಂತಪುರಂ ದಲ್ಲಿಂದು ಭಾರತೀಯ ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಯ ೧೨ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡುತ್ತಿದ್ದರು. ಯುವ ಜನತೆಗೆ ತಮ್ಮ ಅಭಿರುಚಿ ಹಾಗೂ ಪ್ರತಿಭೆಗಳನ್ನು ಬೆಳೆಸಿಕೊಳ್ಳಲು ದೇಶದಲ್ಲಿ ಉತ್ತಮ ವಾತಾವರಣವಿದೆ. ಯುವ ಜನತೆ ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ಭಾರತ, ಅಭಿವೃದ್ಧಿ ಹೊಂದುತ್ತಿದ್ದು, ಅಂತಾರಾಷ್ಟ್ರೀಯ ಹಣಕಾಸು ನಿಧಿ ಮತ್ತು ವಿಶ್ವಬ್ಯಾಂಕ್‌ಗಳಂತಹ ಜಾಗತಿಕ ಸಂಸ್ಥೆಗಳು ಇದನ್ನು ಗುರುತಿಸಿವೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಸಾಧನೆ ಶ್ಲಾಘನೀಯವಾಗಿದೆ. ಜನರ ಜೀವನವನ್ನು ಉತ್ತಮ ಪಡಿಸುವಲ್ಲಿ ಇಸ್ರೋ ಶ್ರಮಿಸುತ್ತಿದೆ ಎಂದು ಶ್ಲಾಘಿಸಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಪ ರಾಷ್ಟ್ರಪತಿ ಅವರು, ಚಿನ್ನದ ಪದಕ ಪ್ರದಾನ ಮಾಡಿದರು. ಐಐಎಸ್‌ಟಿ ಆಡಳಿತ ಮಂಡಳಿ ಅಧ್ಯಕ್ಷರೂ ಆಗಿರುವ ಇಸ್ರೋ ಅಧ್ಯಕ್ಷ ಎಸ್.ಸೋಮನಾಥ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ, ಬ್ರಿಟನ್‌ನ ಪ್ರಧಾನಿಯಾಗಿ ಆಯ್ಕೆಯಾಗಿರುವ ಕೀರ್ ಸ್ಟಾರ್ಮರ್ ಅವರನ್ನು ಸಂಪರ್ಕಿಸಿ ಅಭಿನಂದಿಸಿದ್ದಾರೆ. ತಮ್ಮ ಮಾತುಕತೆ ಸಂದರ್ಭದಲ್ಲಿ

ಜಾಗತಿಕ ಒಳಿತು, ಉಭಯ ದೇಶಗಳ ಪ್ರಗತಿ, ಜನತೆಯ ಸಮೃದ್ಧಿಗಾಗಿ ಸಮಗ್ರ ಕಾರ್ಯತಂತ್ರ ಸಹಭಾಗಿತ್ವ ಮತ್ತು ಭಾರತ ಬ್ರಿಟನ್ ನಡುವೆ ಆರ್ಥಿಕ ಒಪ್ಪಂದಗಳ ಬಲವರ್ಧನೆಗಾಗಿ ಬದ್ಧತೆಯನ್ನು ವ್ಯಕ್ತಪಡಿಸಲಾಯಿತು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಸೂದ್ ಪೆಝೆಶ್‌ಕಿಯಾನ್ ಅವರಿಗೆ ಶುಭ ಕೋರಿದ್ದಾರೆ. ಭಾರತ ಹಾಗೂ ಇರಾನ್ ದೇಶದ ಜನತೆಯ ಶ್ರೇಯೋಭಿವೃದ್ಧಿಗಾಗಿ ದ್ವಿಪಕ್ಷೀಯ ಸಂಬಂಧವನ್ನು ಮತ್ತಷ್ಟು ಬಲಪಡಿಸಲು ಮಸೂದ್ ಅವರೊಂದಿಗೆ ನಿಕಟವಾಗಿ ಕಾರ್ಯ ನಿರ್ವಹಿಸಲು ಉತ್ಸುಕರಾಗಿರುವುದಾಗಿ ಪ್ರಧಾನಮಂತ್ರಿಯವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

**<><*<><>*><>**

ವಿದೇಶಾಂಗ ವ್ಯವಹಾರ ಖಾತೆ ಸಚಿವ ಡಾ.ಎಸ್.ಜೈಶಂಕರ್ ಅವರು, ಬ್ರಿಟನ್‌ನ ವಿದೇಶಾಂಗ ಸಚಿವ ಡೇವಿಡ್ ಲಮ್ಮಿ ಅವರನ್ನು ಇಂದು ಸಂಪರ್ಕಿಸಿ ಮಾತುಕತೆ ನಡೆಸಿದರು. ಸಮಗ್ರ ಕಾರ್ಯತಂತ್ರ ಸಹಭಾಗಿತ್ವ ಹೆಚ್ಚಿಸುವ ಬಗ್ಗೆ ಬದ್ಧತೆ ವ್ಯಕ್ತಪಡಿಸಲಾಯಿತು ಎಂದು ಡಾ.ಎಸ್.ಜೈಶಂಕರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಸಚಿವ ಲಮ್ಮಿ ಅವರನ್ನು ವೈಯಕ್ತಿಕವಾಗಿ ಭೇಟಿ ಮಾಡಲು ಆಶಿಸುತ್ತಿರುವುದಾಗಿಯು ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ.

**<><*<><>*><>**

ಮಿಜೋರಾಮ್ ಮುಖ್ಯಮಂತ್ರಿ ಲಾಲ್‌ಡುಹೊಮ, ದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಪ್ರಸ್ತುತ ಐಝೋಲ್ ನಗರದ ಮಧ್ಯದಲ್ಲಿರುವ ಅಸ್ಸಾಂ ರೈಫಲ್ಸ್ ನೆಲೆಯನ್ನು ನಗರದ ಹೊರವಲಯದಲ್ಲಿರುವ ಝೋಕ್‌ವತಾರ್ ಆವರಣಕ್ಕೆ ಸ್ಥಳಾಂತರಿಸುವ ಬಗ್ಗೆ ಚರ್ಚಿಸಿದರು. ಮಿಜೊರಾಮ್‌ನ ಉದ್ದಿಮೆದಾರರಿಗೆ ಹಣಕಾಸು ನೆರವು ಒದಗಿಸುವ 'ಬನಾ ಕೈಹ' ಯೋಜನೆ ಬಗ್ಗೆಯೂ ಪ್ರಧಾನಿಯವರಿಗೆ ವಿವರಿಸಿದ ಲಾಲ್‌ಡುಹೊಮ, 'ಬಾಮ' ಝೋ ಬಾಂಗ್ಲಾದೇಶ ಜನಾಂಗಿಯ ನಿರಾಶ್ರಿತರ ಕುರಿತಂತೆ ಮಾಹಿತಿ ನೀಡಿದರು.

**<><*<><>*><>**

ಹಿರಿಯ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಅಹಮದಾಬಾದ್‌ನಲ್ಲಿಂದು ಪಕ್ಷದ ಕಾರ್ಯಕರ್ತರೊಂದಿಗೆ ಸಭೆ ನಡೆಸಿದ್ದರು. ಮುಂದಿನ ಚುನಾವಣೆಯಲ್ಲಿ ತಮ್ಮ ಪಕ್ಷ ಜಯ ಸಾಧಿಸುವ ಬಗ್ಗೆ ಅವರು ಈ ಸಂದರ್ಭದಲ್ಲಿ ವಿಶ್ವಾಸ ವ್ಯಕ್ತಪಡಿಸಿದರು. ಇದಕ್ಕೂ ಮುನ್ನ ರಾಹುಲ್ ಗಾಂಧಿ ಅವರು, ಗುಜರಾತ್‌ನ ವಿವಿಧ ದುರ್ಘಟನೆಗಳಲ್ಲಿ ಸಂತ್ರಸ್ಥರಾದ ಕುಟುಂಬಗಳನ್ನು ಭೇಟಿ ಮಾಡಿ ಸಾಂತ್ವಾನ ಹೇಳಿದರು.

<><*<><>*><>

ಮುಂದಿನ ಐದು ವರ್ಷಗಳಲ್ಲಿ ಸುಮಾರು ೨ ಲಕ್ಷ ಗ್ರಾಮಪಂಚಾಯಿತಿಗಳಲ್ಲಿ ವಿವಿಧೋದ್ದೇಶಿತ ಪ್ರಾಥಮಿಕ ಕೃಷಿ ಪತ್ತಿನ ಸಂಘಗಳನ್ನು ಸ್ಥಾಪಿಸಲಾಗುವುದು ಎಂದು ಕೇಂದ್ರ ಗೃಹ ಮತ್ತು ಸಹಕಾರ ಖಾತೆ ಸಚಿವ ಅಮಿತ್ ಶಾ ಹೇಳಿದ್ದಾರೆ. ೧೦೨ನೇ ಅಂತಾರಾಷ್ಟ್ರೀಯ ಸಹಕಾರ ದಿನದ ಸಂದರ್ಭದಲ್ಲಿ ಗುಜರಾತ್‌ನ ಗಾಂಧಿ ನಗರದಲ್ಲಿ ಇಂದು ಏರ್ಪಡಿಸಲಾಗಿದ್ದ ಸಹಕಾರದಿಂದ ಸಮೃದ್ಧಿ ಕಾರ್ಯಕ್ರಮದಡಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು. ಇದುವರೆಗೆ ಸಹಕಾರ ಜಾಲಕ್ಕೆ ಒಳಪಡದ ಗ್ರಾಮಪಂಚಾಯಿತಿಗಳಲ್ಲಿ ವಿವಿಧೋದ್ದೇಶಿತ ಪ್ರಾಥಮಿಕ ಕೃಷಿ ಪತ್ತಿನ ಸಂಘ- ಪಿಎಸಿಎಸ್‌ಗಳನ್ನು ಆದ್ಯತೆ ಮೇಲೆ ಸ್ಥಾಪಿಸಲಾಗುವುದು ಎಂದು ಹೇಳಿದರು. ಸಹಕಾರಿ ಬ್ಯಾಂಕ್‌ಗಳ ಜಾಲವನ್ನು ಬಲಪಡಿಸಲು ಎಲ್ಲ ಜಿಲ್ಲಾ ಮತ್ತು ರಾಜ್ಯ ಸಹಕಾರಿ ಸಂಘಗಳು ಸಹಕಾರಿ ಬ್ಯಾಂಕ್‌ಗಳ ಮೂಲಕವೇ ತಮ್ಮ ಹಣಕಾಸು ವಹಿವಾಟು ನಡೆಸಬೇಕು ಎಂದು ಅಮಿತ್ ಶಾ ಆಗ್ರಪಡಿಸಿದರು. ಸಹಕಾರಿ ಕ್ಷೇತ್ರವನ್ನು ಸಶಕ್ತಗೊಳಿಸಲು ಕೇಂದ್ರ ಸರ್ಕಾರ ಕೈಗೊಂಡಿರುವ ವಿವಿಧ ಉಪಕ್ರಮಗಳನ್ನು ವಿವರಿಸಿದ ಅಮಿತ್ ಶಾ, ಸಹಕಾರಿ ಕಾರ್ಯಜಾಲವನ್ನು ವಿಸ್ತರಣೆ ಮಾಡುವ ಮೂಲಕ ಈ ಸಂಘಟನೆಗಳನ್ನು ಲಾಭದಾಯಕವನ್ನಾಗಿ ಮಾಡಲು ಸಾಧ್ಯ ಎಂದು ಹೇಳಿದರು. ರಾಷ್ಟ್ರೀಯ ಸಹಕಾರಿ ಸಾವಯವ ಕಂಪನಿಯ ಭಾರತ್ ಸಾವಯವ ಅಟ್ಟಾ ಯೋಜನೆಗೆ ಈ ಸಂದರ್ಭದಲ್ಲಿ ಚಾಲನೆ ನೀಡಿದ ಅಮಿತ್ ಶಾ, ನ್ಯಾನೊ ಯೂರಿಯಾ ಖರೀದಿ ಕುರಿತಂತೆ ಗುಜರಾತ್ ಸರ್ಕಾರ, ರೈತರಿಗೆ ತಂದಿರುವ ವಿಶೇಷ ನೆರವು ಯೋಜನೆಯನ್ನು ಆರಂಭಗೊಳಿಸಿದರು. ಇದಲ್ಲದೆ, ಅಮೂಲ್‌ನ ದೆಹಲಿಯ ಮೊದಲ ಸಾವಯವ ಅಂಗಡಿಯನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಕೇಂದ್ರ ಸಹಕಾರ ಖಾತೆ ರಾಜ್ಯ ಸಚಿವ ಮುರುಳೀಧರ ಮೋಹೊಲ್, ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

<><*<><>*><>

ನೀಟ್-ಯುಜಿ ಸಮಾಲೋಚನೆ ದಿನಾಂಕಗಳನ್ನು ಇನ್ನೂ ಅಧಿಸೂಚಿಸಿಲ್ಲ ಎಂದು ಆರೋಗ್ಯ ಸಚಿವಾಲಯ ಸ್ಪಷ್ಟಪಡಿಸಿದೆ. ಈ ಬಗ್ಗೆ ಕೆಲವು ಮಾಧ್ಯಮಗಳಲ್ಲಿ ಬಂದ ವರದಿ ಹಿನ್ನೆಲೆಯಲ್ಲಿ ಆರೋಗ್ಯ ಸಚಿವಾಲಯ ಸ್ಪಷ್ಟನೆ ನೀಡಿದೆ.

<><*<><>*><>

ಸುಸ್ಥಿರ ಅಭಿವೃದ್ಧಿ ನಿಟ್ಟಿನಲ್ಲಿ ನೀತಿ ಆಯೋಗವು ಆರು ಪ್ರಮುಖ ಮಾನದಂಡಗಳನ್ನು ಸಾಧಿಸಲು ದೇಶಾದ್ಯಂತ ಹಮ್ಮಿಕೊಂಡಿರುವ ಸಂಪೂರ್ಣತಾ ಅಭಿಯಾನ ದೇಶದ ಮಹತ್ವಾಕಾಂಕ್ಷೆಯ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಮುಂದುವರಿದಿದೆ. ಆಂಧ್ರಪ್ರದೇಶದ ಚಿಪ್ಪರಗಿ ಮಂಡಲದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೀತಿ ಆಯೋಗದ ಅಧಿಕಾರಿ ಶ್ರುತಿ ಸಭರ್ವಾಲ್ ಮಾತನಾಡಿ, ಆಶೋತ್ತರ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಹಿಂದುಳಿದ

೫೦೦ ಮಂಡಲಗಳನ್ನು ಕೇಂದ್ರ ಸರ್ಕಾರ ಆಯ್ದುಕೊಂಡಿದೆ. ಈ ಮಂಡಲಗಳಲ್ಲಿ ಸುಸ್ಥಿರ ಅಭಿವೃದ್ಧಿ ಸಾಧಿಸಲು ಜಾಗೃತಿ ಹಾಗೂ ಕಾರ್ಯಕ್ರಮ ಜಾರಿಗೊಳಿಸಲಾಗುತ್ತಿದೆ ಎಂದರು. ಅಸ್ಸಾಂನ ಬಕ್ಸಾ ಜಿಲ್ಲೆಯಲ್ಲಿ ಸಂಪೂರ್ಣತಾ ಅಭಿಯಾನದ ಅಂಗವಾಗಿ ಜನರಲ್ಲಿ ತಿಳವಳಿಕೆ ಮೂಡಿಸುವ ರ್‍ಯಾಲಿ ಹಾಗೂ ಶಾಲಾ ಮಕ್ಕಳಿಗೆ ಕಲಾ ಸ್ಪರ್ಧೆ ಏರ್ಪಡಿಸಲಾಗಿತ್ತು.

ಕರ್ನಾಟಕದ ಬೀದರ್ ಜಿಲ್ಲೆಯ ಮಹಂತ್ವಾಕಾಂಕ್ಷಿ ತಾಲೂಕುಗಳಾದ ಔರಾದ, ಕಮಲನಗರ, ಹುಮನಾಬಾದ ಹಾಗೂ ಚಿಟಗುಪ್ಪ ಗಳಲ್ಲಿ ಸಂಪೂರ್ಣತಾ ಅಭಿಯಾನ ಉತ್ಸವ ಕಾರ್ಯಕ್ರಮವನ್ನು ನಿನ್ನೆ ಹಮ್ಮಿಕೊಳ್ಳಲಾಗಿತ್ತು. ಸಂಪೂರ್ಣತಾ ಅಭಿಯಾನ ಜಾಗೃತಿ ಜಾಥಾಕ್ಕೆ ಮುಖ್ಯ ಯೋಜನಾಧಿಕಾರಿಗಳಾದ ಕಿಶೋರಕುಮಾರ ದುಬೆ ಚಾಲನೆ ನೀಡಿದರು.  ನೀತಿ ಆಯೋಗದ ಹಿರಿಯ ಲೆಕ್ಕಾಧಿಕಾರಿ ಶಶಿ ಸರ್ಕಾರ ಯೋಜನೆಯ ಪ್ರತಿಜ್ಞಾವಿಧಿ ಬೋಧಿಸಿದರು. ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುವರ್ಣಾ ಮಾತನಾಡಿ, ಮುಖ್ಯವಾಗಿ ಆರೋಗ್ಯ, ಶಿಕ್ಷಣ ಹಾಗೂ ಪೌಷ್ಟಿಕತೆ ಸೇರಿದಂತೆ ೮೯ ಸೂಚ್ಯಂಕಗಳನ್ನು ಆಧಾರವಾಗಿಟ್ಟುಕೊಂಡು ಈ ಯೋಜನೆ ಅಡಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಈವರೆಗೆ ಜಿಲ್ಲೆಯಲ್ಲಿ ಈ ಯೋಜನೆ ಶೇಕಡ ೮೦ರಷ್ಟು ಪ್ರಗತಿ ಸಾಧಿಸಲಾಗಿದೆ. ಸೆಪ್ಟೆಂಬರ್ ಅಂತ್ಯದವರೆಗೆ ಶೇಕಡ ೧೦೦ರಷ್ಟು ಪ್ರಗತಿ ಮಾಡಲು ಕಾರ್ಯಯೋಜನೆ ಹಾಕಿಕೊಳ್ಳಲಾಗಿದೆ ಎಂದರು. ಈ ಸಂದರ್ಭದಲ್ಲಿ ಗರ್ಭಿಣಿ ಮಹಿಳೆಯರಿಗೆ ತಾಯಿ ಕಾರ್ಡ್, ಅಂಗನವಾಡಿ ಕಾರ್ಯಕರ್ತರಿಗೆ ಮಾಹಿತಿ ತಂತ್ರಾಂಶದಲ್ಲಿ ಮಾಹಿತಿ ಅಳವಡಿಸಲು ಅನುಕೂಲವಾಗುವಂತೆ ಸ್ಮಾರ್ಟ್ ಫೋನ್‌ಗಳನ್ನು ವಿತರಿಸಲಾಯಿತು.

<><*<><>*><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯವು ಅಂತಾರಾಷ್ಟ್ರೀಯ ಯೋಗ ದಿನದ ಮಾಧ್ಯಮ ಸಮ್ಮಾನ್-೨೦೨೪' ಗೌರವಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ನೋಂದಾಯಿತ ಎಲ್ಲಾ ಮುದ್ರಣ ಮಾಧ್ಯಮ, ರೇಡಿಯೋ ಮತ್ತು ದೂರದರ್ಶನ ವಾಹಿನಿಗಳು ಮತ್ತು ಸಂಸ್ಥೆಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಇದೇ ೮ ಕೊನೆಯ ದಿನವಾಗಿದೆ.  ಯೋಗಕ್ಕೆ ಸಂಬಂಧಿಸಿದಂತೆ ಮಾಹಿತಿ ಪ್ರಸಾರ, ಜನರಲ್ಲಿ ಯೋಗದ ಉಪಯೋಗಗಳ ಕುರಿತು ಅರಿವು ಮೂಡಿಸುವುದು ಸೇರಿದಂತೆ ೨೦೨೪ರ ಜೂನ್ ೧೨ರಿಂದ ಜೂನ್ ೨೫ ರವರೆಗೆ ಪ್ರಸಾರ ಮಾಡಿರುವ ದೃಶ್ಯ ಶ್ರವ್ಯ ತುಣುಕುಗಳು ಅಥವಾ ಮುದ್ರಿತ ಸುದ್ದಿ, ಲೇಖನಗಳನ್ನು ಅರ್ಜಿಯೊಂದಿಗೆ ಲಗ್ಗತ್ತಿಸಬೇಕು. ಯೋಗ್ಯ ಅರ್ಜಿಗಳನ್ನು ಪರಿಶೀಲಿಸಿ, ಸ್ವತಂತ್ರ ಜೂರಿ ತಂಡವು ಅಂತಾರಾಷ್ಟ್ರೀಯ ಯೋಗ ದಿನದ ಮಾಧ್ಯಮ ಸಮ್ಮಾನ್ -೨೦೨೪' ಗೌರವಕ್ಕೆ ಆಯ್ಕೆ ಮಾಡಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಪ್ರಕಟಣೆ ತಿಳಿಸಿದೆ.

<><*<><>*><>

ಭಾರತೀಯ ಷೇರು ಮಾರುಕಟ್ಟೆ ಹೊಸ ಏರಿಕೆಯನ್ನು ಕಾಣುತ್ತಿರುವ ಹಿನ್ನೆಲೆಯಲ್ಲಿ ಜೂನ್ ತಿಂಗಳಲ್ಲಿ ೪೨ ಲಕ್ಷಕ್ಕೂ ಹೆಚ್ಚು ಹೊಸ ಡಿಮ್ಯಾಟ್ ಖಾತೆಗಳನ್ನು ತೆರೆಯಲಾಗಿದೆ.

<><*<><>*><>

ಜಿಂಬಾಬ್ವೆಯ ಹರಾರೆಯಲ್ಲಿ ನಡೆಯುತ್ತಿರುವ ಟಿ-೨೦ ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತಕ್ಕೆ, ಗೆಲ್ಲಲು ಜಿಂಬಾಂಬೆ ೧೧೬ ರನ್‌ಗಳ ಗುರಿ ನೀಡಿದೆ. ಟಾಸ್ ಗೆದ್ದ ಭಾರತ ಜಿಂಬಾಂಬೆ ತಂಡವನ್ನು ಬ್ಯಾಟಿಂಗ್‌ಗೆ ಇಳಿಸಿತು. ನಿಗದಿತ ೨೦ ಓವರ್‌ಗಳಲ್ಲಿ ಬಿಂಬಾಂಬೆ ೯ ವಿಕೆಟ್ ನಷ್ಟಕ್ಕೆ ೧೧೫ ರನ್ ಗಳಿಸಿತು. ೧೧೬ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿರುವ ಭಾರತ, ಇತ್ತೀಚಿನ ವರದಿಯಂತೆ ೧೬ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೮೪ ರನ್ ಮಾಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>